# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 841 |
| ಸದಸ್ಯರ ಹೆಸರು | : ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 13-07-2023 |
| ಉತ್ತರಿಸಬೇಕಾದ ಸಚಿವರು | : ಮಾನ್ಯ ಮುಖ್ಯ ಮಂತ್ರಿಗಳು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 7ನೇ ವೇತನ ಆಯೋಗದ ಸಮಿತಿಯನ್ನು ಯಾವಾಗ ರಚಿಸಲಾಯಿತು; ಈ ಸಮಿತಿಗೆ ನಿಗದಿಪಡಿಸಲಾದ ಕಾಲಮಿತಿ ಎಷ್ಟು; ಸಮಿತಿಯ ವರದಿಯನ್ನು ಯಾವಾಗ ನಿರೀಕ್ಷಿಸಬಹುದು ಮತ್ತು ಸಮಿತಿಯು ನೀಡುವ ಶಿಫಾರಸ್ಸುಗಳನ್ನು ಸಂಪೂರ್ಣವಾಗಿ ರಾಜ್ಯ ಸರ್ಕಾರವು ಜಾರಿಗೊಳಿಸುವುದೇ; | ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಕುರಿತಂತೆ, ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಿ 6 ತಿಂಗಳ ಕಾಲಮಿತಿಯಲ್ಲಿ ವರದಿಯನ್ನು ಸಲ್ಲಿಸಲು ತ್ರಿಸದಸ್ಯರ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ, ದಿನಾಂಕ 19-11-2022ರಂದು ಆದೇಶ ಹೊರಡಿಸಲಾಗಿರುತ್ತದೆ.<br>ತದನಂತರದಲ್ಲಿ, ಸರ್ಕಾರದ ವಿವಿಧ ಇಲಾಖೆಗಳು ಮತ್ತು ಸ್ವಾಯತ್ತ ಸಂಸ್ಥೆಗಳೊಂದಿಗೆ ಸಮಾಲೋಚಿಸಲು ನಿಗದಿಪಡಿಸಿರುವ ಕಾಲಾವಧಿಯನ್ನು ಪುನರ್ ಪರಿಶೀಲಿಸಿ ಆಯೋಗಕ್ಕೆ ನಿಗದಿಪಡಿಸಿರುವ ಕಾಲಾವಧಿಯನ್ನು ದಿನಾಂಕ: 19.05.2023ರಿಂದ 06 ತಿಂಗಳು ವಿಸ್ತರಿಸಿರುತ್ತದೆ. |

<table>
<tr><td>ಆ)</td><td>ಈ ಸಮಿತಿಯು ಕಾರ್ಯಪ್ರವೃತ್ತರಾಗಿರುವ ಸಂದರ್ಭದಲ್ಲಿ ಹಿಂದಿನ ಸರ್ಕಾರವು ರಾಜ್ಯ ಸರ್ಕಾರಿ ನೌಕರರಿಗೆ ಮಧ್ಯಂತರ ಪರಿಹಾರವಾಗಿ ಎಷ್ಟು ಪ್ರತಿಶತ ಪರಿಹಾರವನ್ನು ಒದಗಿಸಿತ್ತು; (ಆದೇಶದ ಪ್ರತಿ ನೀಡುವುದು)</td><td rowspan="2">ರಾಜ್ಯ ಸರ್ಕಾರಿ ನೌಕರರ ಹಿತದೃಷ್ಟಿಯಿಂದ 7ನೇ ರಾಜ್ಯ ವೇತನ ಆಯೋಗದ ಅಂತಿಮ ವರದಿಯನ್ನು ಕಾಯ್ದಿರಿಸಿ, ದಿನಾಂಕ: 01-04-2023 ರಿಂದ ಜಾರಿಗೆ ಬರುವಂತೆ ಸರ್ಕಾರಿ ನೌಕರರ ಮೂಲ ವೇತನ /ಮೂಲ ಪಿಂಚಣಿಯ ಶೇ 17ರಷ್ಟು ಮಧ್ಯಂತರ ಪರಿಹಾರವನ್ನು ಮಂಜೂರು ಮಾಡಿ ಆದೇಶ ಹೊರಡಿಸಲಾಗಿರುತ್ತದೆ.<br>ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆಯ ವಿಷಯವು ಸರ್ಕಾರದ ನೀತಿ ನಿರ್ಣಯಕ್ಕೆ ಸಂಬಂಧಿಸಿದ ವಿಷಯವಾಗಿದ್ದು, ವೇತನ ಆಯೋಗವು ಸಲ್ಲಿಸುವ ಅಂತಿಮ ವರದಿಯನ್ನು ರಾಜ್ಯದ ಆರ್ಥಿಕ ಸ್ಥಿತಿಗತಿಗಳನ್ನು ಗಮನದಲ್ಲಿರಿಸಿ ಪರಿಶೀಲಿಸಲಾಗುವುದು</td></tr>
<tr><td>ಇ)</td><td>ಪ್ರಸ್ತುತ ಸರ್ಕಾರವು ಇದೇ ರೀತಿ ನೌಕರರಿಗೆ ಸಮಿತಿಯು ವರದಿಯನ್ನು ಕೊಡುವ ಯಾವುದಾದರೂ ಪರಿಹಾರವನ್ನು ನೀಡುವುದೇ ಅಥವಾ ಸಮಿತಿಗೆ ಕಾಲಮಿತಿಯನ್ನು ನಿಗದಿಪಡಿಸಿ ಶೀಘ್ರವಾಗಿ 7ನೇ ವೇತನ ಆಯೋಗವನ್ನು ಜಾರಿ ಮಾಡುವುದು?</td></tr>
</table>

ಸಂ: ಆಇ 15 ಎಸ್‌ಆರ್‌ಪಿ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ